ಅಧಿಕಾರಿಗಳು : ನೌಕರರ ವಿರುದ್ಧ ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಕೆ.ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):-

ಅ) 3 (ಮೂರು).

ಆ) ಮಾಜಾಲಿ - ಕಾರವಾರ ತಾಲ್ಲೂಕು: 1992-93ರಲ್ಲಿ 99 ಮನೆಗಳನ್ನು ಕಟ್ಟಲು ಆದೇಶಿಸಿದ್ದು, 72 ಮನೆಗಳನ್ನು ಪೂರ್ಣಗೊಳಿಸಲಾಗಿದ್ದು, ಫಲಾನುಭವಿಗಳ ವಶಕ್ಕೆ ನೀಡಲಾಗಿದೆ. ಉಳಿದ 27 ಮನೆಗಳ ನಿರ್ಮಾಣ ಪ್ರಗತಿಯಲ್ಲಿದೆ.

ಶಿರಾಲಿ - ಭಟ್ಕಳ್ ತಾಲ್ಲೂಕು: 1995-96ರ ಅಂತ್ಯದಲ್ಲಿ 12 ಮನೆಗಳನ್ನು ನಿರ್ಮಾಣ ಮಾಡಲು ಆದೇಶ ನೀಡಲಾಗಿದ್ದು ಸಧ್ಯದಲ್ಲಿ ಈ ಕಾಮಗಾರಿಯನ್ನು ಪ್ರಾರಂಭಗೊಳಿಸಲಾಗುವುದು.

ಅಳ್ವೆದಂಡೆ - ಕುಮಟಾ ತಾಲ್ಲೂಕು: 1995-96ರ ಅಂತ್ಯದಲ್ಲಿ 30 ಮನೆಗಳನ್ನು ನಿರ್ಮಾಣ ಮಾಡಲು ಆದೇಶ ನೀಡಿದ್ದು, 1996-97ರಲ್ಲಿ ಈ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಫಲಾನುಭವಿಗಳು ಕನಿಷ್ಠ 10ರ ಗುಂಪು ನಿವೇಶನಗಳನ್ನು ಪ್ರತಿ ಹಳ್ಳಿಯಲ್ಲಿಯೂ ಹೊಂದದೇ ಇದ್ದುದರಿಂದ, ಹಾಗೂ ಅಗತ್ಯವಾದ ನಿವೇಶನಗಳನ್ನು ಪಡೆಯುವಲ್ಲಿ ಕೆಲವು ತೊಂದರೆಗಳನ್ನು ಕಂಡು ಬಂದಿದ್ದರಿಂದ ಕಾಮಗಾರಿಯನ್ನು ತೆಗೆದುಕೊಳ್ಳುವಲ್ಲಿ ವಿಳಂಬವಾಗಿದೆ.

ಇ) ಉದ್ಭವಿಸುವುದಿಲ್ಲ.

ವಿಷಯ:- ಮೈಸೂರಿನ ಒಳಾಂಗಣ ಕ್ರೀಡಾಂಗಣದ ಕಳಪೆ ಕಾಮಗಾರಿ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 613 (706)

ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ):- ಮಾನ್ಯ ಬಂದರು ಮತ್ತು ಮೀನುಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರಿನ ಚಾಮುಂಡಿ ಕ್ರೀಡಾಂಗಣದ ಆವರಣದಲ್ಲಿ ರಾಷ್ಟ್ರೀಯ ಕ್ರೀಡೆಗಳ ಸಲುವಾಗಿ ನೂತನವಾಗಿ ನಿರ್ಮಾಣವಾಗುತ್ತಿರುವ ಒಳಾಂಗಣ ಕ್ರೀಡಾಂಗಣದ ಕೆಲಸ ಕಳಪೆ ಕಾಮಗಾರಿಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಈ ವಿಷಯದಲ್ಲಿ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಆ) ಯಾವ ತಿಂಗಳಲ್ಲಿ ಈ ಕ್ರೀಡೆಗಳೂ ಪ್ರಾರಂಭವಾಗುವುದು?

ಶ್ರೀ ಕೆ.ಜಯಪ್ರಕಾಶ್ ಹೆಗ್ಡೆ (ಬಂದರು ಮತ್ತು ಮೀನುಗಾರಿಕೆ ರಾಜ್ಯ ಸಚಿವರು):-

ಅ) ಕಳಪೆ ಕಾಮಗಾರಿ ನಡೆಯುತ್ತಿರುವುದಿಲ್ಲ ಕ್ರಮ ತೆಗೆದುಕೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) 1996 ಡಿಸೆಂಬರ್ ಎರಡನೇ ವಾರದಲ್ಲಿ ನಡೆಸಲು ಉದ್ದೇಶಿಸಿದೆ.

ವಿಷಯ:- ಕುಣಿಗಲ್ ವಿಧಾನ ಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ರಸ್ತೆಗಳ ದುರಸ್ತಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 614 (1509)

ಶ್ರೀ ಎಸ್.ಪಿ.ಮುದ್ದಹನುಮೇಗೌಡ (ಕುಣಿಗಲ್):- ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಮೂವತ್ತು ಲಕ್ಷ ರೂ.ಗಳ ಅಂದಾಜಿನಲ್ಲಿ ಲೋಕೋಪಯೋಗಿ ರಸ್ತೆಗಳ ದುರಸ್ಥಿ ಕಾರ್ಯ ಕೈಗೆತ್ತಿಕೊಳ್ಳುವುದಾಗಿ ಲೋಕೋಪಯೋಗಿ ಸಚಿವರು ಪ್ರಕಟಿಸಿದ್ದು ನಿಜವೇ?

ಆ) ಹಾಗಿದ್ದಲ್ಲಿ ಕುಣಿಗಲ್ ವಿಧಾನಸಭಾ ಕ್ಷೇತ್ರವೂ ಸೇರಿದಂತೆ ರಾಜ್ಯದಲ್ಲಿ ಈ ಯೋಜನೆಯ ಪ್ರಗತಿ ಏನು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):-

ಅ) 1995-96ನೇ ಸಾಲಿನಲ್ಲಿ 30 ಲಕ್ಷ ರೂ.ಗಳ ಅಂದಾಜಿನಲ್ಲಿ ಪ್ರತಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಲೋಕೋಪಯೋಗಿ ರಸ್ತೆಗಳ ಅಭಿವೃದ್ಧಿ ಮಾಡಲಾಗುವುದೆಂದು ಪ್ರಕಟಿಸಿ ಅದರಂತೆ ನವೆಂಬರ್ 1995ರಲ್ಲಿ ಈ ಕಾರ್ಯಕ್ರಮಕ್ಕೆ ಅನುಮೋದನೆ ನೀಡಲಾಯಿತು.

ಆ) ಕುಣಿಗಲ್ ಕ್ಷೇತ್ರಕ್ಕೆ ಸಂಬಂಧಿಸಿದಂತೆ 30 ಲಕ್ಷ ರೂ. ಕಾರ್ಯಕ್ರಮದಡಿಯಲ್ಲಿ 4